# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಲೆಕ್ಕ ಪತ್ರ ಸ್ಥಾಯಿ ಸಮಿತಿಯಲ್ಲಿ ದಿನಾಂಕ:13-02-2017ರಂದು ಸಂಜೆ 4.00 ಗಂಟೆಗೆ ನಡೆದ ಸಭೆಯ ನಡವಳಿಗಳು**

| ಕ್ರ. ಸಂ | ಹಾಜರಿದ್ದ ಸದಸ್ಯರು ಶ್ರೀಯುತರುಗಳಾದ | | ಹಾಜರಿದ್ದ ಅಧಿಕಾರಿಗಳು |
|---|---|---|---|
| 1. | ನೇತ್ರಾ ನಾರಾಯಣ್ | – ಅಧ್ಯಕ್ಷರು | ಮು.ಅ.(ಬೃಹತ್ ನೀರುಗಾಲುವೆ) |
| 2. | ಸವಿತಾ ವಿ.ಕೃಷ್ಣ | – ಸದಸ್ಯರು | ಕಾರ್ಯಪಾಲಕ ಅಭಿಯಂತರರು |
| 3. | ಎನ್.ಉಮಾ | – ಸದಸ್ಯರು | ಸ.ಕಾ.ನಿ.ಅಭಿಯಂತರರು |
| 4. | ರಾಧಮ್ಮ ವೆಂಕಟೇಶ್ | – ಸದಸ್ಯರು | ಸಹಾಯಕ ಅಭಿಯಂತರರು |
| 5. | ಜಿ.ಬಾಲಕೃಷ್ಣನ್ | – ಸದಸ್ಯರು | |
| 6. | ವಿ.ಸುರೇಶ್ | – ಸದಸ್ಯರು | |
| 7. | ಹೆಚ್.ಕುಸುಮಾ | – ಸದಸ್ಯರು | |
| 8. | ಎಂ.ಮಾಲತಿ | – ಸದಸ್ಯರು | |
| 9. | ಎಂ.ಶಾಮಲ | – ಸದಸ್ಯರು | |
| 10. | ಕೆ.ವಿ.ರಾಜೇಂದ್ರಕುಮಾರ್ | – ಸದಸ್ಯರು | |
| 11. | ಎಂ.ಗೌತಮ್ ಕುಮಾರ್ | – ಸದಸ್ಯರು | |

(ಹಿಂದಿನ ಸಭೆಯ ನಡವಳಿಕೆಗಳನ್ನು ಓದಿ ದಾಖಲಿಸಿಕೊಳ್ಳಲಾಯಿತು)

ಲೆಕ್ಕ ಪತ್ರ ಸ್ಥಾಯಿ ಸಮಿತಿಯ ಅಧ್ಯಕ್ಷರು, ಸಭೆಯಲ್ಲಿ ಹಾಜರಿದ್ದ ಸ್ಥಾಯಿ ಸಮಿತಿಯ ಸದಸ್ಯರು ಹಾಗೂ ಅಧಿಕಾರಿಗಳನ್ನು ಸ್ವಾಗತ್ತಿಸುತ್ತಾ, ತಮ್ಮ ತಮ್ಮ ಪರಿಚಯ ಮಾಡಿಕೊಳ್ಳಲು ಕೋರಿದರು. ತತ್ಸಂಬಂಧವಾಗಿ ಸ್ಥಾಯಿ ಸಮಿತಿಯ ಸದಸ್ಯರು ಹಾಗೂ ಹಾಜರಿದ್ದ ಅಧಿಕಾರಿಗಳು ತಮ್ಮ ತಮ್ಮ ಪರಿಚಯವನ್ನು ಮಾಡಿಕೊಂಡರು.

ನಂತರ ಅಧ್ಯಕ್ಷರು ಹಾಜರಿದ್ದ ಅಧಿಕಾರಿಗಳಿಗೆ ಮುಖ್ಯ ಅಭಿಯಂತರರು (ಬೃಹತ್ ನೀರುಗಾಲುವೆ) ಕಛೇರಿಗೆ ಸಂಬಂಧಿಸಿದಂತೆ 2006-07ನೇ ಸಾಲಿನಿಂದ 2013-14ನೇ ಸಾಲಿನವರೆಗಿನ ಲೆಕ್ಕಪರಿಶೋಧನಾ ವರದಿಯಲ್ಲಿ ಬಾಕಿ ಇರುವ ಕಂಡಿಕೆಗಳು, ಆಕ್ಷೇಪಣೆಯಲ್ಲಿಟ್ಟಿರುವ ಮೊತ್ತ ಮತ್ತು ವಸೂಲಾತಿ ಮೊತ್ತದ ಬಗ್ಗೆ ಹಾಗೂ ಸದರಿ ಸಾಲುಗಳಿಗೆ ಸಂಬಂಧಿಸಿದ ಲೆಕ್ಕ ಪರಿಶೋಧನಾ ವರದಿಗಳಿಗೆ ಅನುಸರಣಾ ವರದಿಯನ್ನು ಸಲ್ಲಿಸಿರುವ ಬಗ್ಗೆ ವಿವರವಾದ ಮಾಹಿತಿಯನ್ನು ಸಲ್ಲಿಸಲು ಸೂಚಿಸಿದಾಗ, ಲೆಕ್ಕ ಪರಿಶೋಧನಾ ವರದಿಯಲ್ಲಿನ ಆಕ್ಷೇಪಣೆ ಮತ್ತು ವಸೂಲಾತಿಗೆ ಅನುಸರಣಾ ವರದಿಯನ್ನು ಸಲ್ಲಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಲೆಕ್ಕಾಧೀಕ್ಷಕರು ತಿಳಿಸಿದರು.

ನಂತರ ಅಧ್ಯಕ್ಷರು ಸದರಿ ಕಛೇರಿಯ ವ್ಯವಹಾರವನ್ನು ಯಾವ ಬ್ಯಾಂಕ್ ಖಾತೆಯ ಮೂಲಕ ನಿರ್ವಹಿಸಲಾಗುತ್ತಿದೆ ಈ ಬಗ್ಗೆ ವಿವರವನ್ನು ಒದಗಿಸಲು ಸೂಚಿಸಿದಾಗ, ಹಾಜರಿದ್ದ ಲೆಕ್ಕಾಧೀಕ್ಷಕರು ಕರೆಂಟ್ ಅಕೌಂಟ್ ಮುಖಾಂತರ ವ್ಯವಹರಿಸುತ್ತಿರುವುದಾಗಿ, ಸದರಿ ಖಾತೆಯಲ್ಲಿ ಸುಮಾರು ರೂ.5.00ಕೋಟಿಗೂ ಅಧಿಕ ಮೊತ್ತವು ಬಾಕಿ ಇರುವುದಾಗಿ ತಿಳಿಸಿದರು. ಸದರಿ ಕಛೇರಿಯಲ್ಲಿ ಇನ್ನೂ ಚಾಲ್ತಿ ಖಾತೆಯಲ್ಲಿ ವ್ಯವಹರಿಸುತ್ತಿದ್ದು, ಚಾಲ್ತಿ ಖಾತೆಯಲ್ಲಿನ ಮೊತ್ತಕ್ಕೆ ಯಾವುದೇ ಬಡ್ಡಿಯನ್ನು ನೀಡುವುದಿಲ್ಲವಾದ್ದರಿಂಧ, ಕೂಡಲೇ ಚಾಲ್ತಿ ಖಾತೆಯನ್ನು ರದ್ದುಪಡಿಸಿ ಎಸ್.ಬಿ.ಖಾತೆಯನ್ನು ತೆರೆದು ವ್ಯವಹರಿಸಲು ಕ್ರಮ ಕೈಗೊಳ್ಳಲು ಸೂಚಿಸಿದರು.

ತದನಂತರ ಸದಸ್ಯರಾದ ಶ್ರೀಯುತ ಗೌತಮ್‌ಕುಮಾರ್ ರವರು ಮುಖ್ಯ ಅಭಿಯಂತರರು (ಬೃಹತ್ ನೀರುಗಾಲುವೆ) ವಿಭಾಗದಲ್ಲಿ ಪ್ರಸ್ತುತ ವಿವಿಧ ವೃಂದದ ಎಷ್ಟು ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿರುತ್ತಾರೆ ಈ ಬಗ್ಗೆ ಸಂಪೂರ್ಣ ಮಾಹಿತಿಯನ್ನು ಸಲ್ಲಿಸಲು ಸೂಚಿಸಿದಾಗ, ಮೊದಲಿಗೆ ಹಾಜರಿದ್ದ ಅಧಿಕಾರಿಗಳು ಈ ಬಗ್ಗೆ ಸಮರ್ಪಕವಾದ ಮಾಹಿತಿ ನೀಡುವಲ್ಲಿ ವಿಫಲರಾಗಿ, ನಂತರ 9 ಕಾರ್ಯಪಾಲಕ ಅಭಿಯಂತರರು, 18 ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, 17 ಸಹಾಯಕ ಅಭಿಯಂತರರು ಇತರೆ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿರುವುದಾಗಿ ತಿಳಿಸಿದರು.

ನಂತರ ಪ್ರಸ್ತುತ ಕಾರ್ಯಾದೇಶ ನೀಡಲಾಗಿರುವ ಕಾಮಗಾರಿಗಳ ಸಂಪೂರ್ಣ ವಿವರಗಳನ್ನು, ನಗದು ಪುಸ್ತಕ, ಎಫ್‌ಎಸ್‌ಡಿ ಕಡಿತಗೊಳಿಸಿರುವ ವಿವರ, ಕಪ್ಪುಪಟ್ಟಿಗೆ ಸೇರಿಸಿರುವ ಗುತ್ತಿಗೆದಾರರುಗಳ ವಿವರಗಳನ್ನು ಸಮಿತಿಗೆ ಸಲ್ಲಿಸಲು ಸೂಚಿಸುತ್ತಾ ಕಾಮಗಾರಿಗಳಿಗೆ ಕಾರ್ಯಾದೇಶ ನೀಡುವಾಗ ಯಾವ ನಿಯಮಗಳನ್ನು ಅನುಸರಿಸಬೇಕಾಗುತ್ತದೆ ಈ ಬಗ್ಗೆ ಮಾಹಿತಿಯನ್ನು ಸಲ್ಲಿಸಲು ತಿಳಿಸಿದಾಗ, ಹಾಜರಿದ್ದ ಲೆಕ್ಕಾಧಿಕ್ಷಕರು ಬ್ಯಾಂಕ್ ಗ್ಯಾರಂಟಿಯನ್ನು ಪಡೆದು ಕಾಮಗಾರಿಗೆ ಕಾರ್ಯಾದೇಶವನ್ನು ನೀಡಲಾಗುತ್ತದೆಂದು ತಿಳಿಸಿದರು. ಆಗ ಸದಸ್ಯರು ಕೆಲವೊಂದು ಪ್ರಕರಣದಲ್ಲಿ ಬ್ಯಾಂಕ್ ಗ್ಯಾರಂಟಿಯನ್ನು ಪಡೆಯದೇ ಕಾರ್ಯಾದೇಶವನ್ನು ನೀಡಿರುವುದು ತಿಳಿದುಬಂದಿದ್ದು, ಇದರಿಂದ ಪಾಲಿಕೆಗೆ ಆರ್ಥಿಕವಾಗಿ ನಷ್ಟ ಉಂಟಾಗಿರುತ್ತದೆಂದು ಅಕ್ಷೇಪಣೆ ವ್ಯಕ್ತಪಡಿಸಿದಾಗ, ಬ್ಯಾಂಕ್ ಗ್ಯಾರಂಟಿ ಪಡೆಯದೇ ಇದ್ದಲ್ಲಿ ಸದರಿ ಮೊತ್ತವನ್ನು ಎಫ್.ಎಸ್.ಡಿ ಯಿಂದ ಕಟಾಯಿಸಿಕೊಳ್ಳುತ್ತಿರುವುದಾಗಿ ಸಮತಿಗೆ ಮಾಹಿತಿ ನೀಡಿದರು.

ನಂತರ ಅಧ್ಯಕ್ಷರು ಮಾತನಾಡುತ್ತಾ ಪಾಲಿಕೆಯ ವ್ಯಾಪ್ತಿಯಲ್ಲಿ ಇರುವ ಒಟ್ಟು ಪ್ರೈಮರಿ ಡ್ರೈನ್‌ಗಳ ಸಂಪೂರ್ಣ ವಿವರ ಹಾಗೂ ಪ್ರಸ್ತುತ ಬೃಹತ್ ನೀರುಗಾಲುವೆ ವಿಭಾಗಕ್ಕೆ ಮಂಜೂರಾಗಿರುವ ಅನುದಾನದ ವಿವರ ನೀಡಲು ಸೂಚಿಸಲಾದ ಮೇರೆಗೆ, ಹಾಜರಿದ್ದ ಕಾ.ಪಾ.ಅಭಿಯಂತರರು ಸರ್ಕಾರದಿಂದ ರೂ.800.00ಕೋಟಿ ಅನುದಾನ ಮಂಜೂರಾಗಿದ್ದು, ಸದರಿ ಅನುದಾನದಡಿಯಲ್ಲಿ ವಿಧಾನಸಭಾ ಕ್ಷೇತ್ರವಾರು ಪಾಲಿಕೆಯ ವ್ಯಾಪ್ತಿಯ ಎಲ್ಲಾ ವಲಯಗಳ ಬೃಹತ್ ನೀರುಗಾಲುವೆಗಳ ನಿರ್ವಹಣೆ ಮತ್ತು ಅಭಿವೃದ್ಧಿ ಕಾಮಗಾರಿ ಕೈಗೊಳ್ಳುವುದಾಗಿ ತಿಳಿಸಿದಾಗ, ಸದರಿ ಅನುದಾನದಡಿಯಲ್ಲಿ ಕೈಗೊಳ್ಳುವ ಕಾಮಗಾರಿಗಳ ಸಂಪೂರ್ಣ ವಿವರಗಳನ್ನು ಸಮಿತಿಗೆ ಸಲ್ಲಿಸಲು ಸೂಚಿಸಿದರು.

ನಂತರ ಅಧ್ಯಕ್ಷರು 2014–15ನೇ ಸಾಲಿನಲ್ಲಿ ಬೃಹತ್ ನೀರುಗಾಲುವೆ ವಿಭಾಗದಿಂದ ಕೈಗೊಳ್ಳಲಾಗಿರುವ ಕಾಮಗಾರಿಗಳ ಸಂಪೂರ್ಣ ವಿವರ ಹಾಗೂ ಯಾವ ಸ್ವರೂಪದ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಎಂಬುದರ ಮಾಹಿತಿ ಸಲ್ಲಿಸಲು ಸೂಚಿಸಿದಾಗ, ರಾಜಕಾಲುವೆಗಳಿಗೆ ಬ್ರಿಡ್ಜ್ ನಿರ್ಮಾಣ, culverts, U shape drain, Box drain, re-modeling of retaining walls ಕಾಮಗಾರಿಗಳನ್ನು ಕೈಗೊಳ್ಳುವುದಾಗಿ ಎಲ್ಲಾ ಕಾಮಗಾರಿಗಳನ್ನು ಮಾನ್ಯ ಆಯುಕ್ತರವರ ಅನುಮೋದನೆ ಪಡೆದು ನಿರ್ವಹಿಸುವುದಾಗಿ ತಿಳಿಸಿದರು.

ಮುಂದುವರಿದಂತೆ ರಾಜಕಾಲುವೆ ಒತ್ತುವರಿಗಳನ್ನು ತೆರವುಗೊಳಿಸುವುದಕ್ಕೆ ಸಂಬಂಧಿಸಿದಂತೆ ಸುಮಾರು 822 ಒತ್ತುವರಿಗಳನ್ನು ತೆರವುಗೊಳಿಸಿರುವುದಾಗಿ ಉಚ್ಛ ನ್ಯಾಯಾಲಯದಲ್ಲಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಸದರಿ ಮಾಹಿತಿಗಳನ್ನು ಹಾಗೂ ಒತ್ತುವರಿ ತೆರವುಗೊಳಿಸಿದ ಸಮಯದಲ್ಲಿ ಉತ್ಪತ್ತಿಯಾದ ಡೆಬ್ರಿಸ್ ಅನ್ನು ಎಲ್ಲಿ ಸಾಗಿಸಲಾಗಿರುತ್ತದೆ, ಇದಕ್ಕೆ ಎಷ್ಟು ವೆಚ್ಚವಾಗಿರುತ್ತದೆ ಎಂಬುದರ ಸಂಪೂರ್ಣ ಮಾಹಿತಿಯನ್ನು ಸಮಿತಿಗೆ ಸಲ್ಲಿಸಲು ಸೂಚಿಸಿದಾಗ, ಹಾಜರಿದ್ದ ಮುಖ್ಯ ಅಭಿಯಂತರರು 822 ಒತ್ತುವರಿಗಳನ್ನು ಒಂದೇ ಬಾರಿ ತೆರವುಗೊಳಿಸಿರುವುದಿಲ್ಲವೆಂದು ಹಂತ ಹಂತವಾಗಿ ಒತ್ತುವರಿಗಳನ್ನು ತೆರವುಗೊಳಿಸಲಾಗಿರುತ್ತದೆಂದು ಇದರ ಸಂಪೂರ್ಣ ಮಾಹಿತಿಯನ್ನು ಸಮಿತಿಗೆ ಸಲ್ಲಿಸುವುದಾಗಿ ತಿಳಿಸಿದರು.

ನಂತರ ಅಧ್ಯಕ್ಷರು ರಾಜಕಾಲುವೆಗಳಿಂದ ತೆಗೆಯಲಾಗುವ ಹೂಳನ್ನು ಯಾವ ಯಾವ ಕ್ವಾರಿಗಳಿಗೆ ಸಾಗಿಸಲಾಗುತ್ತದೆ, ಕ್ವಾರಿಗಳ ಸಂಪೂರ್ಣ ಮಾಹಿತಿಯನ್ನು ಸಲ್ಲಿಸಲು ಸೂಚಿಸಿದಾಗ, ಹಾಜರಿದ್ದ ಮುಖ್ಯ ಅಭಿಯಂತರವರು ಪ್ರಸ್ತುತ ಮಲ್ಲಸಂದ್ರ ಕ್ವಾರಿಗೆ ಹೂಳನ್ನು ಸಾಗಿಸುತ್ತಿರುವುದಾಗಿ, ರಾಜಕಾಲುವೆಗಳಲ್ಲಿ ಘನತ್ಯಾಜ್ಯ ವಿಲೇವಾರಿ ಗುತ್ತಿಗೆದಾರರು ಕಸವನ್ನು ತಂದು ಸುರಿಯುತ್ತಿದ್ದು, ಹೂಳಿಗಿಂತ ಕಸದ ಪ್ರಮಾಣವೇ

ಹೆಚ್ಚಾಗಿದ್ದು, ಹೂಳಿನೊಂದಿಗೆ ಕಸವನ್ನು ಸಹ ಸದರಿ ವಿಭಾಗದ ವತಿಯಿಂದಲೇ ಸಾಗಿಸುತ್ತಿರುವುದಾಗಿ ಮಾಹಿತಿ ನೀಡಿದರು.

ಅಧ್ಯಕ್ಷರು ಸದರಿ ಕ್ವಾರಿಯ ನಿರ್ವಹಣೆಯನ್ನು ಯಾವ ರೀತಿ ಮಾಡಲಾಗುತ್ತದೆ ಮತ್ತು ಇದಕ್ಕಾಗಿ ಎಷ್ಟು ಅನುದಾನ ಮಂಜೂರಾಗಿರುತ್ತದೆ ಎಂಬುದರ ಮಾಹಿತಿ ನೀಡಲು ಸೂಚಿಸಿದಾಗ, ಕ್ವಾರಿಯ ಬಳಿ ಮೇಲ್ವಿಚಾರಕರನ್ನು ನಿಯೋಜಿಸಿದ್ದು, ಪ್ರತಿದಿನ ಸದರಿ ಕ್ವಾರಿಗೆ ಹೋಗುವ ವಾಹನಗಳ ಮತ್ತು ಹೂಳಿನ ಪ್ರಮಾಣದ ವಿವರಗಳನ್ನು ದಾಖಲು ಮಾಡಿಕೊಳ್ಳುವುದಾಗಿ ಲಭ್ಯವಿರುವ ಅನುದಾನದಲ್ಲಿ ಆದ್ಯತೆಯ ಮೇಲೆ ಹೂಳನ್ನು ತೆಗೆಯುವುದಾಗಿ ಮಾಹಿತಿ ನೀಡುತ್ತಾ ಎಲ್ಲಾ ವಿವರಗಳನ್ನು ಸಮಿತಿಗೆ ಸಲ್ಲಿಸುವುದಾಗಿ ತಿಳಿಸಿದರು.

ಕೊನೆಯಲ್ಲಿ ಅಧ್ಯಕ್ಷರು ಮಾತನಾಡುತ್ತಾ, ಸಮಿತಿಯು ಕೋರಿರುವ ಮೇಲ್ಕಂಡ ಎಲ್ಲಾ ಮಾಹಿತಿಗಳನ್ನು ಒಂದು ವಾರದ ಒಳಗೆ ಸಮಿತಿಗೆ ಸಲ್ಲಿಸಲು ಸೂಚಿಸುತ್ತಾ, ಅಧಿಕಾರಿ/ಸಿಬ್ಬಂದಿಗಳು ಕಛೇರಿಯ ಲೆಕ್ಕಪತ್ರಗಳ ನಿರ್ವಹಣೆಯಲ್ಲಿ ಅಸಡ್ಡೆ ಮನೋಭಾವವನ್ನು ತೋರದೆ ಕಾರ್ಯಯೋಜನೆಯನ್ನು ರೂಪಿಸಿಕೊಂಡು ಕರ್ತವ್ಯವನ್ನು ನಿರ್ವಹಿಸಬೇಕೆಂದು, ಸಮಿತಿಯು ತಮ್ಮ ಕಛೇರಿಗೆ ಭೇಟಿ ನೀಡಿ ತಪಾಸಣೆ ಕೈಗೊಳ್ಳುವ ಸಂದರ್ಭದಲ್ಲಿ ಯಾವುದೇ ರೀತಿಯ ಲೋಪ ದೋಷಗಳು ಇಲ್ಲದಂತೆ ಎಲ್ಲಾ ಕಡತಗಳನ್ನು ನಿರ್ವಹಿಸಿರಲು ಸೂಚಿಸುತ್ತಾ ಸಭೆಯನ್ನು ವಂದನೆಗಳೊಂದಿಗೆ ಮುಕ್ತಾಯಗೊಳಿಸಿದರು.

ಅಧ್ಯಕ್ಷರು
ಲೆಕ್ಕಪತ್ರ ಸ್ಥಾಯಿ ಸಮಿತಿ

**ಪ್ರತಿಯನ್ನು:**

1.ಪೂಜ್ಯ ಮಹಾಪೌರರು ರವರ ಅವಗಾಹನೆಗೆ ತರಲು ವಿಶೇಷ ಕರ್ತವ್ಯಾಧಿಕಾರಿ ರವರಿಗೆ ಕಳುಹಿಸಿದೆ.
2.ಮಾನ್ಯ ಉಪ ಮಹಾಪೌರ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಕಳುಹಿಸಿದೆ.
3.ಮಾನ್ಯ ಆಯುಕ್ತರು ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
4.ಮಾನ್ಯ ಆಡಳಿತ ಪಕ್ಷದ ನಾಯಕರಿಗೆ, ಮಾನ್ಯ ವಿರೋಧ ಪಕ್ಷದ ನಾಯಕರಿಗೆ, ಮಾನ್ಯ ಜೆ.ಡಿ.ಎಸ್. ಪಕ್ಷದ ನಾಯಕರಿಗೆ ಮಾಹಿತಿಗಾಗಿ ಕಳುಹಿಸಿದೆ.
5.ಮುಖ್ಯ ಅಭಿಯಂತರರು, (ಬೃಹತ್ ನೀರುಗಾಲುವೆ) ರವರಿಗೆ ಕಳುಹಿಸುತ್ತಾ ಸಭೆಯಲ್ಲಿ ಚರ್ಚಿಸಿದಂತೆ ಅಗತ್ಯ ಕ್ರಮಗಳನ್ನು ಕೈಗೊಂಡು ಸಮಿತಿಗೆ ವರದಿ ಸಲ್ಲಿಸಲು ಸೂಚಿಸಿದೆ
6.ಕಛೇರಿ ಕಡತಕ್ಕೆ